# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1528** |
| ಸದಸ್ಯರ ಹೆಸರು | : | ಡಾ.ತಳವಾರ್ ಸಾಬಣ್ಣ<br>(ನಾಮನಿರ್ದೇಶಿತರು) |
| ಉತ್ತರಿಸುವ ದಿನಾಂಕ | : | 19-12-2025 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲಬುರಗಿ ಜಿಲ್ಲೆಯ ಆರ್ಥಿಕತೆಯ ಬೆನ್ನೆಲುಬಾದ ತೊಗರಿ ಬೆಳೆಯನ್ನು ಜಿಲ್ಲೆಯಲ್ಲಿ ಪ್ರತಿ ವರ್ಷ ಎಷ್ಟು ಹೆಕ್ಟೇರ್‌ನಲ್ಲಿ ರೈತರು ಬೆಳೆಯುತ್ತಾರೆ; (ಐದು ವರ್ಷಗಳ ವಿವರ ನೀಡುವುದು)</td><td>ಕಲಬುರಗಿ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ಬೆಳೆಯಲಾದ ತೊಗರಿ ಬೆಳೆಯ ವಿಸ್ತೀರ್ಣದ ವಿವರ ಈ ಕೆಳಗಿನಂತಿದೆ.
<table>
<tr><th>ವರ್ಷ</th><th>ವಿಸ್ತೀರ್ಣ (ಹೆ.ಗಳಲ್ಲಿ)</th></tr>
<tr><td>2020-21</td><td>593699</td></tr>
<tr><td>2021-22</td><td>633798</td></tr>
<tr><td>2022-23</td><td>486238</td></tr>
<tr><td>2023-24</td><td>577430</td></tr>
<tr><td>2024-25</td><td>629925</td></tr>
</table>
2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕಲಬುರಗಿ ಜಿಲ್ಲೆಯಲ್ಲಿ 590599 ಹೆಕ್ಟೇರ್‌ನಷ್ಟು ತೊಗರಿ ಬೆಳೆಯನ್ನು ಬಿತ್ತನೆ ಮಾಡಲಾಗಿರುತ್ತದೆ.</td></tr>
<tr><td>ಆ)</td><td>ಜಿಲ್ಲೆಯ ತೊಗರಿ ಬೆಳೆಗಾರರಿಗೆ ಉತ್ತೇಜನ ನೀಡಲು ಸ್ಥಾಪನೆಯಾದ ತೊಗರಿ ಮಂಡಳಿಗೆ ಒದಗಿಸಿದ ಸಿಬ್ಬಂದಿ ಮತ್ತು ಭೌತಿಕ ಸೌಕರ್ಯಗಳೇನು; (ವಿವರ ನೀಡುವುದು)</td><td>ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಮಂಡಳಿಯಲ್ಲಿ ಕೃಷಿ ಇಲಾಖೆಯಿಂದ ನಿಯೋಜನೆ ಮೇರೆಗೆ ಇಬ್ಬರು ಅಧಿಕಾರಿಗಳು ಹಾಗೂ ಹೊರಗುತ್ತಿಗೆ ಆಧಾರದ ಮೇರೆಗೆ 9 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.
<table>
<tr><th>ಕ್ರ. ಸಂ.</th><th>ಹುದ್ದೆ</th><th>ಮಂಜೂರು</th><th>ಭರ್ತಿ</th><th>ಖಾಲಿ</th></tr>
<tr><td>1</td><td>ವ್ಯವಸ್ಥಾಪಕ ನಿರ್ದೇಶಕರು (ನಿಯೋಜನೆ)</td><td>1</td><td>0</td><td>1</td></tr>
<tr><td>2</td><td>ಸಹಾಯಕ ಕೃಷಿ ನಿರ್ದೇಶಕರು</td><td>2</td><td>2</td><td>0</td></tr>
<tr><td>3</td><td>ಸಿ ಗುಂಪು</td><td>5</td><td>5</td><td>0</td></tr>
<tr><td>4</td><td>ಡಿ ಗುಂಪು</td><td>2</td><td>2</td><td>0</td></tr>
<tr><td>5</td><td>ವಾಹನ ಚಾಲಕರು</td><td>2</td><td>2</td><td>0</td></tr>
</table>
ಮಂಡಳಿಯು ಮೂಲಭೂತ ಸೌಕರ್ಯಗಳೊಂದಿಗೆ ಕೊಟ್ನೂರು (ಡಿ), ಕಲಬುರಗಿ ಜಿಲ್ಲೆಯಲ್ಲಿ ತನ್ನದೇ ಆದ ಆಡಳಿತ ಕಚೇರಿಯನ್ನು ಹೊಂದಿರುತ್ತದೆ.</td></tr>
</table>

| | | |
|---|---|---|
| ಇ) | ಜಿಲ್ಲೆಯ ತೊಗರಿ ಮಂಡಳಿಯು ಅನುದಾನ ಮತ್ತು ಇತರೆ ಸೌಕರ್ಯಗಳ ಕೊರತೆಯಿಂದ ಬಳಲುತ್ತಿರುವುದರಿಂದ ಮಂಡಳಿಗೆ ಕಾಯಕಲ್ಪ ನೀಡಲು ಕೈಗೊಂಡ ಕ್ರಮಗಳೇನು; | ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಗೆ, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಬೆಳೆಯುವ ವಿಶಿಷ್ಟವಾದ ಭೌಗೋಳಿಕ ಸೂಚ್ಯಂಕ ಹೊಂದಿದ ತೊಗರಿ ಬೇಳೆಯನ್ನು GI ಅಡಿಯಲ್ಲಿ ನೋಂದಾಯಿತ ರೈತರಿಂದ ತೊಗರಿಯನ್ನು ಖರೀದಿಸಿ, ಅವುಗಳನ್ನು ಸಂಸ್ಕರಿಸಿ, "ಭೀಮಾ ಪಲ್ಸಸ್ ಬ್ರಾಂಡ್ ನಡಿ ಮಾರಾಟ ಮಾಡುವ ಹೊಸ ಯೋಜನೆಯ ಅನುಷ್ಠಾನಕ್ಕಾಗಿ 2022-23ನೇ ಸಾಲಿನ ಆಯವ್ಯಯದಲ್ಲಿ ರೂ.2.00ಕೋಟಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ ಹಾಗೂ 2021-22ನೇ ಸಾಲಿನಿಂದ ಆಡಳಿತಾತ್ಮಕ ವೆಚ್ಚಕ್ಕಾಗಿ ಸದರಿ ಮಂಡಳಿಗೆ ಪ್ರತಿ ವರ್ಷ ರೂ.50.00ಲಕ್ಷ ಅನುದಾನವನ್ನು ರಾಜ್ಯ ಸರ್ಕಾರದಿಂದ ಒದಗಿಸಲಾಗಿರುತ್ತದೆ.<br>ದ್ವಿದಳ ಧಾನ್ಯಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆಗಾಗಿ ಘಟಕವನ್ನು ಹಾಗೂ ದ್ವಿದಳ ಧಾನ್ಯಗಳ ಸಂಗ್ರಹಣೆಗಾಗಿ 100 ಮೆಟ್ರಿಕ್ ಟನ್ ಸಾಮರ್ಥ್ಯದ 02 ಗೋದಾಮುಗಳನ್ನು ನಿರ್ಮಿಸಲಾಗುತ್ತಿದೆ. |
| ಈ) | ಉತ್ಕೃಷ್ಟ ತೊಗರಿ ಬೆಳೆಯುವ ಕಲಬುರಗಿ ಜಿಲ್ಲೆಗೆ ಒಂದು ಬ್ರಾಂಡಿಂಗ್ ಹಂತಕ್ಕೆ ಒಯ್ದು ಅಲ್ಲಿನ ರೈತರ ಬದುಕಿಗೆ ಆಧಾರವಾಗಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ? | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ರೈತರಿಂದ ಹಾಗೂ ರೈತ ಉತ್ಪಾದಕರ ಸಂಸ್ಥೆಗಳಿಂದ ಭೌಗೋಳಿಕ ಸೂಚ್ಯಂಕ (GI) ಅಡಿಯಲ್ಲಿ ಪ್ರಮಾಣೀಕರಿಸಲಾದ ತೊಗರಿಯನ್ನು ಖರೀದಿಸಿ, ಸಂಸ್ಕರಣೆ ಮಾಡಿ "ಭೀಮಾ ಪಲ್ಸಸ್" ಎಂಬ ಬ್ರ್ಯಾಂಡ್ ಹೆಸರಿನಲ್ಲಿ ಬ್ರ್ಯಾಂಡಿಂಗ್, ಮಾರ್ಕೆಟಿಂಗ್ ಮತ್ತು ಮೌಲ್ಯವರ್ಧನೆ ಮಾಡುವ ಮೂಲಕ ಜನಪ್ರಿಯಗೊಳಿಸಲಾಗುತ್ತಿದ್ದು, ಈ ಭಾಗದಲ್ಲಿ ತೊಗರಿ ಬೆಳೆಯುವ ರೈತರಿಗೆ ಉತ್ತಮ ಬೆಲೆ ದೊರಕಿಸುವ ಉದ್ದೇಶ ಹೊಂದಲಾಗಿದೆ.<br>ಈ ಉದ್ದೇಶಕ್ಕಾಗಿ ಮಂಡಳಿಯ ವ್ಯಾಪ್ತಿಯಲ್ಲಿ ದ್ವಿದಳಧಾನ್ಯಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆಗಾಗಿ ಘಟಕವನ್ನು ನಿರ್ಮಿಸಲಾಗುತ್ತಿದೆ. |

*ಕೃ ಇ 239 ಎಎಂಎಸ್ 2025*

**(ಎನ್.ಚಲುವರಾಯಸ್ವಾಮಿ)**
ಕೃಷಿ ಸಚಿವರು